ಕರ್ನಾಟಕ ಸರ್ಕಾರ

**ಜಿಲ್ಲಾ ಅಧಿಕಾರಿಗಳ ಕಛೇರಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಶಿವಮೊಗ್ಗ.**

ನಂ. 415, ಬಸವಚೇತನ, 100 ಅಡಿ ರಸ್ತೆ, ರವೀಂದ್ರ ನಗರ, e-mail- dobcmshimoga@gmail.com ☎ (08182) 222129.

**ಸಂ/ಹಿಂವಕಇ/ಸಿಬ್ಬಂದಿ/ಎ-3/ನೇ.ನೇ/ಸಿಆರ್-89/2016-17 ದಿನಾಂಕ-30-12-2017**

# ಪ್ರಕಟಣೆ

**ವಿಷಯ:** ಶಿವಮೊಗ್ಗ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಖಾಲಿ ಇರುವ 92 ಅಡುಗೆ ಸಹಾಯಕರ ಹುದ್ದೆಗಳಿಗೆ ಅಂತಿಮ ಆಯ್ಕೆ ಪಟ್ಟಿ ಪ್ರಕಟಿಸುವ ಕುರಿತು.

**ಉಲ್ಲೇಖ:** ಈ ಕಛೇರಿಯ ಸಮಸಂಖ್ಯೆ ಪ್ರಕಟಣೆ ದಿನಾಂಕ-5-12-2017

❖❖❖

ಶಿವಮೊಗ್ಗ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿನಿಲಯಗಳಲ್ಲಿ ಖಾಲಿ ಇರುವ ಅಡುಗೆ ಸಹಾಯಕರ 92 ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಿಕೊಳ್ಳಲು ಉಲ್ಲೇಖಿತ ಪ್ರಕಟಣೆಯನ್ವಯ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು (ಪರಿಷ್ಕೃತ) ಹೊರಡಿಸಲಾಗಿರುತ್ತದೆ.

ತಾತ್ಕಾಲಿಕ ಆಯ್ಕೆ ಪಟ್ಟಿಗೆ ನಿಗದಿತ ಅವಧಿಯೊಳಗೆ ಯಾವುದೇ ಆಕ್ಷೇಪಣೆಗಳು ಸ್ವೀಕೃತವಾಗದೇ ಇರುವುದರಿಂದ ಈ ಪ್ರಕಟಣೆಯೊಂದಿಗೆ ಲಗತ್ತಿಸಲಾಗಿರುವ ಅನುಬಂಧ-2 ರಲ್ಲಿ ನಮೂದಿಸಿರುವಂತೆ 92 ಅಡುಗೆ ಸಹಾಯಕರ ಹುದ್ದೆಗಳಿಗೆ ಅಂತಿಮ ಆಯ್ಕೆ ಪಟ್ಟಿಯನ್ನು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಹೊರಡಿಸಲಾಗಿದೆ.

**ಷರತ್ತುಗಳು :**

1) ಸದರಿ ಆಯ್ಕೆ ಪಟ್ಟಿಯು ಅಡುಗೆ ಸಹಾಯಕರ ಹುದ್ದೆಯ ನೇಮಕಾತಿಗೆ ಸಂಬಂಧಿಸಿದಂತೆ ಅಂತಿಮ ಆಯ್ಕೆ ಪಟ್ಟಿ ಮಾತ್ರ ಆಗಿದ್ದು, ನೇಮಕಾತಿ ಆದೇಶವಾಗಿರುವುದಿಲ್ಲ.
2) ಅಭ್ಯರ್ಥಿಗಳ ಮೂಲ ದಾಖಲಾತಿಗಳ ಪರಿಶೀಲನೆ, ದೇಹದಾಡ್ಯತೆ ಪ್ರಮಾಣ ಪತ್ರ, ಪೋಲೀಸ್ ವರದಿಗಳು ಹಾಗೂ ಮೀಸಲಾತಿಗೆ ಸಂಬಂಧಿಸಿದಂತೆ ಸಿಂಧುತ್ವ ಪ್ರಮಾಣ ಪತ್ರ ಪಡೆದ ನಂತರ ಹಾಗೂ ನೇಮಕಾತಿಗೆ ಸಂಬಂಧಿಸಿದಂತೆ ಸರ್ಕಾರ/ಇಲಾಖೆ ಹೊರಡಿಸುವ ಮಾರ್ಗಸೂಚಿಗಳನ್ವಯ ನೇಮಕಾತಿ ಆದೇಶ ಹೊರಡಿಸಲಾಗುವುದು.
3) ಸದರಿ ಅಂತಿಮ ಆಯ್ಕೆ ಪಟ್ಟಿಯು ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯದ ರಿಟ್ ಪಿಟಿಷನ್ ಅರ್ಜಿ ಸಂಖ್ಯೆ: 28550-28626/2017 (S-RES) ರ ಅಂತಿಮ ಆದೇಶಕ್ಕೆ ಒಳಪಟ್ಟಿರುತ್ತದೆ.
4) ಈ ಪ್ರಕಟಣೆಯೊಂದಿಗೆ ಶೇ.10 ರಷ್ಟು ಕಾಯ್ದಿರಿಸಿದ ಆಯ್ಕೆ ಪಟ್ಟಿಯನ್ನು ಸಹ ಹೊರಡಿಸಲಾಗಿದ್ದು, ಅಂತಿಮ ಆಯ್ಕೆ ಪಟ್ಟಿಯಲ್ಲಿರುವ ಅಭ್ಯರ್ಥಿಗಳು ಮಾತ್ರ ಮೂಲ ದಾಖಲಾತಿಗಳ ಪರಿಶೀಲನೆಗೆ ಹಾಜರಾಗಬೇಕು.

**ಅಂತಿಮ ಆಯ್ಕೆ ಪಟ್ಟಿಯಲ್ಲಿರುವ ಅಭ್ಯರ್ಥಿಗಳ ಮೂಲ ದಾಖಲಾತಿಗಳ ಪರಿಶೀಲನೆಯನ್ನು** ದಿನಾಂಕ-10-01-2018 **ರಂದು ಬೆಳಿಗ್ಗೆ** 11.00 **ಗಂಟೆಯಿಂದ ಡಿ. ದೇವರಾಜ ಅರಸು ಭವನ, ಬೈಪಾಸ್ ರಸ್ತೆ, ಸಹ್ಯಾದ್ರಿ ಕಾಲೇಜು ಹತ್ತಿರ, ಶಿವಮೊಗ್ಗ ಇಲ್ಲಿ ನಡೆಸಲಾಗುವುದು.**

ಅಡುಗೆ ಸಹಾಯಕರ ಹುದ್ದೆಯ ಅಂತಿಮ ಆಯ್ಕೆ ಪಟ್ಟಿಯನ್ನು ಜಿಲ್ಲಾಧಿಕಾರಿಗಳು, ಶಿವಮೊಗ್ಗ ಇವರ ಅಧಿಕೃತ ವೆಬ್‌ಸೈಟ್ www.shimoga.nic.in ರಲ್ಲಿ ಪ್ರಕಟಿಸಲಾಗಿದ್ದು, ಮೂಲ ದಾಖಲಾತಿಗಳ ಪರಿಶೀಲನೆಗೆ ಹಾಜರಾಗದೇ ಇರುವ ಅಭ್ಯರ್ಥಿಗಳ ನೇಮಕಾತಿಯನ್ನು ಅಸಿಂಧುಗೊಳಿಸಲಾಗುವುದು. ಈ ಸಂಬಂಧ ಪತ್ರ ವ್ಯವಹಾರಗಳಿಗೆ ಅವಕಾಶವಿರುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08182-222129/222523 ನ್ನು ಕಛೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿರುತ್ತದೆ.

**ಪುಟ ಸಂಖ್ಯೆ- 2 ಕ್ಕೆ ಮುಂದುವರೆಸಿದೆ.**